**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಶಿವಕುಮಾರ್ ಕೆ. (ನಾಮ ನಿರ್ದೇಶನ ಚುನಾವಣಾ ಕ್ಷೇತ್ರ) ಇವರು ನಿಯಮ 72 ರಡಿಯಲ್ಲಿ ನೀಡಿರುವ ಗಮನ ಸೆಳೆಯುವ ಸೂಚನಾ ಸಂಖ್ಯೆ:65ಕ್ಕೆ ಉತ್ತರ**

**ವಿಷಯ: ಕಾವೇರಿ ಕೊಳ್ಳದ ಶೇ.70-80 ರಷ್ಟು ಅಚ್ಚುಕಟ್ಟು ಪ್ರದೇಶಗಳಲ್ಲಿ ಬೆಳೆ ಉಲ್ಲಂಘನೆ ಪದ್ಧತಿಯಿಂದಾಗಿ ಭತ್ತದ ಬೆಳೆ ವ್ಯಾಪಕವಾಗಿ ಬೆಳೆಯುತ್ತಿರುವುದರಿಂದ ರೈತರಿಗೆ ಆಗುತ್ತಿರುವ ನಷ್ಟ ತಪ್ಪಿಸಲು ಹಾಗೂ ವ್ಯವಸಾಯ, ಕುಡಿಯುವ ನೀರು ಮತ್ತು ಕೈಗಾರಿಕಾ ಉದ್ದೇಶಕ್ಕಾಗಿ ಕಾವೇರಿ ನ್ಯಾಯಾಧೀಕರಣ ತೀರ್ಪಿನಂತೆ 284.75 ಟಿ.ಎಂ.ಸಿ. ಪ್ರಮಾಣದ ನೀರನ್ನು ಬಳಸಿಕೊಳ್ಳುವ ಕುರಿತು.**

*****

ಕಾವೇರಿ ಜಲಾನಯನದಲ್ಲಿ ಒಳಪಡುವ ಯೋಜನೆಗಳ ಅಚ್ಚುಕಟ್ಟು ಪ್ರದೇಶದಲ್ಲಿ ಬೆಳೆಯುವ ಬೆಳೆಗಳಿಗೆ ಜಿಲ್ಲಾ ಉಸ್ತುವಾರಿ ಸಚಿವರ ಅಧ್ಯಕ್ಷತೆಯಲ್ಲಿ ಸ್ಥಳೀಯ ರೈತ ಮುಖಂಡರೊಂದಿಗೆ ಮತ್ತು ಜನಪ್ರತಿನಿಧಿಗಳೊಂದಿಗೆ ನೀರಾವರಿ ಸಲಹಾ ಸಮಿತಿ ಸಭೆ ನಡೆಸಿ, ಜಲಾಶಯಗಳಿಗೆ ಹರಿದು ಬರುವ ಒಳಹರಿವಿನ ನೀರಿನ ಆಧಾರದ ಮೇಲೆ ನಾಲೆಗಳಲ್ಲಿ ಬೆಳೆಗಳಿಗೆ ಅಗತ್ಯವಿರುವ ನೀರನ್ನು ಹರಿಸಲು ಅಧಿಸೂಚನೆ ಹೊರಡಿಸಲಾಗುತ್ತಿರುತ್ತದೆ. ಇದರ ಆಧಾರದ ಮೇಲೆ ಯೋಜನೆಯ ಅಧಿಕಾರಿಗಳು ಕಾವೇರಿ ನ್ಯಾಯಾಧಿಕರಣದಿಂದ ಹಂಚಿಕೆಯಾದ ನೀರನ್ನು ಸಮರ್ಪಕವಾಗಿ ಬಳಸುವ ಹಿನ್ನೆಲೆಯಲ್ಲಿ ಅಚ್ಚುಕಟ್ಟು ಪ್ರದೇಶಗಳಲ್ಲಿ ಬೆಳೆಯುವ ಬೆಳೆಗಳಿಗೆ ನೀರು ಪೂರೈಸಲಾಗುತ್ತಿದೆ.

ಅಲ್ಲದೇ ಅಚ್ಚುಕಟ್ಟು ವ್ಯಾಪ್ತಿಯಲ್ಲಿನ ಕೆರೆಗಳಿಗೆ ಕುಡಿಯುವ ನೀರಿನ ಉದ್ದೇಶಕ್ಕಾಗಿ ನೀರನ್ನು ತುಂಬಿಸಲಾಗುತ್ತಿದೆ; ಮತ್ತು ಬೆಂಗಳೂರು ಮಹಾನಗರಕ್ಕೆ ಹಾಗೂ ನದಿಯ ಪಾತ್ರದಲ್ಲಿ ಬರುವ ಕೆಲವು ನಗರ, ಪಟ್ಟಣ ಮತ್ತು ಇತರೆ ಗ್ರಾಮಗಳಿಗೂ ಸಹ ಕುಡಿಯುವ ನೀರನ್ನು ಪೂರೈಸಲಾಗುತ್ತಿದೆ.

ಹಂಚಿಕೆಯಾದ ನೀರಿನ ಸಮರ್ಪಕ ಬಳಕೆಯ (optimum utilization of the allocated water) ದಿಸೆಯಲ್ಲಿ ಸುಧಾರಣೆಗಾಗಿ ರೈತರಲ್ಲಿ ಕಡಿಮೆ ನೀರಿನ ಅವಶ್ಯಕತೆ ಇರುವ ಬೆಳೆಗಳನ್ನು ಬೆಳೆಯಲು ಉತ್ತೇಜಿಸಿ ಸೂಕ್ತ ಮಾರ್ಗದರ್ಶನ ನೀಡಲಾಗುತ್ತಿದೆ. ರೈತರಲ್ಲಿ ನೀರಿನ ನಿರ್ವಹಣೆಯ ಬಗ್ಗೆ ಜಾಗೃತಿ ಮೂಡಿಸಿ, ಪರ್ಯಾಯ ಬೆಳೆಗಳನ್ನು ಬೆಳೆಯಲು ನೀರು ಬಳಕೆದಾರರ ಸಹಕಾರ ಸಂಘದಿಂದ ಸಲಹೆಗಳನ್ನು ನೀಡಲಾಗುತ್ತಿದೆ.

ಒಣ ಪ್ರದೇಶಕ್ಕೆ ನೀರನ್ನು ಒದಗಿಸಲು ಸರ್ಕಾರವು Dry Land Committee ಯನ್ನು ರಚಿಸಿದ್ದು, ಸಮಿತಿಯು ನೀಡುವ ವರದಿಯನ್ನಾಧರಿಸಿ ಸೂಕ್ತ ಕ್ರಮವನ್ನು ತೆಗೆದುಕೊಳ್ಳಲಾಗುವುದು.

ನೀರಾವರಿ, ಕುಡಿಯುವ ನೀರು ಮತ್ತು ಕೈಗಾರಿಕಾ ಉದ್ದೇಶಕ್ಕಾಗಿ 284.75 ಟಿಎಂಸಿ ಬಳಕೆ ಮಾಡಲು ಅವಕಾಶವಿದ್ದು ಯೋಜನೆಗಳನ್ನು ರೂಪಿಸಲಾಗಿದೆ. ಕೆಲವು ವರ್ಷಗಳಲ್ಲಿ ಮಧ್ಯಮ ಜಲಾಶಯಗಳು ಮತ್ತು ಸಣ್ಣ ನೀರಾವರಿ ಕೆರೆಗಳಲ್ಲಿ ನೀರಿನ ಹರಿವು ವಿನ್ಯಾಸಗೊಳಿಸಿದ ಹರಿವಿಗಿಂತ ಕಡಿಮೆಯಾಗಿರುವ ಕಾರಣ ನೀರಾವರಿ ಬಳಕೆಯಲ್ಲಿ ವ್ಯತ್ಯಾಸವಿರುತ್ತದೆ.

**ಸಂ: ಜಸಂಇ 84 ಎನ್‌ಎಲ್‌ಎ 2025**

**(ಡಿ. ಕೆ. ಶಿವಕುಮಾರ್)**
**ಉಪ ಮುಖ್ಯಮಂತ್ರಿ**